2008–09ನೇ ಸಾಲಿನ ನಷ್ಟಕ್ಕೆ ಹೆಚ್ಚಿನ ದರದಲ್ಲಿ ವಿದ್ಯುತ್ ಖರೀದಿ ಮಾಡಿರುವುದು ಮತ್ತು ಸರ್ಕಾರ ನೀಡಬೇಕಾಗಿದ್ದ ಸಹಾಯಧನದಲ್ಲಿ ಕಡಿತವಾಗಿರುವುದು ಹಾಗೂ ಹೆಸ್ಕಾಂ ಕಳೆದ ವರ್ಷಕ್ಕಿಂತ ರೂ.33.76 ಕೋಟಿಯಷ್ಟು ಹೆಚ್ಚಿಗೆ ಸಾಲದ ಮರುಪಾವತಿಯ ಮೇಲೆ ಬಡ್ಡಿಯನ್ನು ಪಾವತಿಸಿರುವುದು ಮುಖ್ಯ ಕಾರಣಗಳಾಗಿರುತ್ತವೆ.

2009–10ನೇ ಸಾಲಿನ ಆರ್ಥಿಕ ವರ್ಷವು ಇನ್ನೂ ಅಂತ್ಯಗೊಳ್ಳಬೇಕಾಗಿರುತ್ತದೆ. ಪ್ರಸಕ್ತ ಸಾಲಿನ ಲಾಭ ನಷ್ಟವು ಸರ್ಕಾರವು ನೀಡುವ ಸಬ್ಸಿಡಿ ಮೊತ್ತದ ಮೇಲೆ ಅವಲಂಬಿತವಾಗಿದೆ. ಲಾಭ ನಷ್ಟದ ಕುರಿತು ಲೆಕ್ಕಾಚಾರವು ಆರ್ಥಿಕ ವರ್ಷ ಪೂರ್ಣಗೊಂಡ ನಂತರ ಮಾಡಬೇಕಾಗಿರುತ್ತದೆ.

ವಿಜಯನಗರ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಪೊಲೀಸ್ ಠಾಣೆಗಳಲ್ಲಿ ಪೇದೆಗಳ ಕೊರತೆ

168 (477) ಶ್ರೀ ಎಂ.ಕೃಷ್ಣಪ್ಪ (ವಿಜಯನಗರ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಯ ನಗರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪೊಲೀಸ್ ಠಾಣೆಗಳಲ್ಲಿ ಮಂಜೂರಾಗಿರುವ ಪೊಲೀಸ್ ಪೇದೆ/ಮುಖ್ಯ ಪೇದೆ ಹುದ್ದೆಗಳೆಷ್ಟು;

ಆ) ಕೊರತೆಯಿರುವ ಸಿಬ್ಬಂದಿಯಿಂದಾಗಿ ಕ್ಷೇತ್ರದ ವ್ಯಾಪ್ತಿಯಲ್ಲಿ ಪ್ರತಿದಿನ ಸರಗಳ್ಳತನ, ಮನೆಗಳ್ಳತನ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ ಹುದ್ದೆಗಳನ್ನು ತುಂಬಲು ಹಾಗೂ ಅಪರಾಧಗಳನ್ನು ತಡೆಯಲು ತೆಗೆದುಕೊಂಡಿರುವ ಕ್ರಮಗಳೇನು;

ಡಾ॥ ವಿ.ಎಸ್. ಆಚಾರ್ಯ (ಗೃಹ ಸಚಿವರು) :

ಅ) ಪೊಲೀಸ್ ಕಾನ್ಸ್‌ಟೇಬಲ್‌ಗಳ ಹುದ್ದೆಗಳು: 258 ಪೊಲೀಸ್ ಹೆಡ್‌ಕಾನ್ಸ್‌ಟೇಬಲ್‌ಗಳ ಹುದ್ದೆಗಳು:92

ಆ) ಇಲ್ಲ.

ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ಪೊಲೀಸ್ ಠಾಣಾಧಿಕಾರಿಗಳಿಗೆ ಅಪರಾಧಗಳನ್ನು ತಡೆಗಟ್ಟಲು ಸೂಕ್ತ ನಿರ್ದೇಶನಗಳನ್ನು ನೀಡಲಾಗಿದೆ. ಅಲ್ಲದೆ, ರಾತ್ರಿ ಮತ್ತು ಹಗಲು ಗಸ್ತು ಕರ್ತವ್ಯವನ್ನು ನಿರ್ವಹಿಸಲು ಕಟ್ಟುನಿಟ್ಟಿನ ಕ್ರಮವನ್ನು ಸಹ ಕೈಗೊಳ್ಳಲಾಗಿದೆ. ಅಪರಾಧಗಳನ್ನು ತಡೆಗಟ್ಟಲು ನುರಿತ ಸಿಬ್ಬಂದಿಗಳ ವಿಶೇಷ ತಂಡಗಳನ್ನು ರಚಿಸಿ ಅಪರಾಧತಡೆ ಮಾಸ ಕಾರ್ಯಕ್ರಮವನ್ನು ಹಮ್ಮಿಕೊಂಡು ಜನಸಾಮಾನ್ಯರಲ್ಲಿ ಜಾಗೃತಿ ಮತ್ತು ಅರಿವು ಮೂಡಿಸುವ ಮೂಲಕ ಅಪರಾಧ ಚಟುವಟಿಕೆಗಳನ್ನು ತಡೆಗಟ್ಟಲು ಮತ್ತು ಶೀಘ್ರವಾಗಿ ಪತ್ತೆ ಹಚ್ಚಲು ಕ್ರಮ ಕೈಗೊಳ್ಳಲಾಗಿದೆ.

ವಿಜಯನಗರ ಕ್ಷೇತ್ರದಲ್ಲಿ ಕುಡಿಯುವ ನೀರಿನ ಅಭಾವ

170 (479) ಶ್ರೀ ಎಂ. ಕೃಷ್ಣಪ್ಪ (ವಿಜಯನಗರ) : ಮಾನ್ಯ ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಯನಗರ ಕ್ಷೇತ್ರದ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಂದಿದ್ದಲ್ಲಿ, ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ;

ಇ) ಈ ಬೇಸಿಗೆಯಲ್ಲಿ ಸಮರ್ಪಕ ಕುಡಿಯುವ ನೀರು ವಿತರಣೆ ಮಾಡಲು ಕೈಗೊಂಡ ಕ್ರಮವೇನು?

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) :

ಅ) ಹೌದು.

ಆ) ವಿಜಯನಗರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸುಮಾರು 23,000 ಸಂಪರ್ಕಗಳಿದ್ದು, ಈ ಕ್ಷೇತ್ರದಲ್ಲಿ ಪ್ರತಿ ನಾಗರೀಕರಿಗೆ ದಿನಂಪ್ರತಿ ಸರಾಸರಿ 100 ಲೀಟರ್ ನೀರು ಸರಬರಾಜಾಗುತ್ತಿರುತ್ತದೆ. ಬೇಸಿಗೆ ಸಮಯದಲ್ಲಿ ನೀರಿನ ಬೇಡಿಕೆ ಸರಿದೂಗಿಸಲು ಹಾಲಿ ಇರುವ 217 ವಿದ್ಯುತ್ ಚಾಲಿತ ಕೊಳವೆ ಬಾವಿಗಳು ಹಾಗೂ 223 ಕೈಚಾಲಿತ ಕೊಳವೆ ಬಾವಿಗಳ ಜೊತೆಗೆ ಹೊಸದಾಗಿ 33 ಕೊಳವೆ ಬಾವಿಗಳಿಂದ ನೀರು ಸರಬರಾಜು ಮಾಡಲಾಗುತ್ತಿರುತ್ತದೆ. ಇದಲ್ಲದೇ ತುರ್ತು ಸಮಯದಲ್ಲಿ ನೀರು ಸರಬರಾಜು